

ಅರುಣ ಪಿ. ಭಟ್ಟ

## ವಾರಭವಿಷ್ಯ: 6.2.2020ರಿಂದ 12.2.2020ರವರೆಗೆ




ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಬಹುದು. ಉದ್ಯೋಗದಲ್ಲಿ ಕೆಲವು ಸಮಸ್ಯೆಗಳು ಕಾಣಿಸಿಕೊಳ್ಳುತ್ತವೆ. ಸವಾಲೊಂದು ಹೊಸ ಪ್ರಗತಿಗೆ ಪ್ರೇರಣೆ ನೀಡುತ್ತದೆ. ನಿಮ್ಮ ಸೋದರರು ನಿಮ್ಮ ಸಹಾಯಕ್ಕೆ ಬರುತ್ತಾರೆ.

ಶುಭದಿನ 10. ಗಣಪತಿಗೆ 108 ದೂರ್ವಾರ್ಚನೆ ಮಾಡಿ.




ಕುಟುಂಬದ ಬಗ್ಗೆ ಹೆಮ್ಮೆ ಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ.

ಶುಭದಿನ 8. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಹಣಕಾಸಿನ ಸಂಸ್ಥೆಗಳ ಜತೆಗೆ ಒಪ್ಪಂದ ಸಾಧ್ಯತೆ. ನಿಮ್ಮ ವ್ಯಾಪಾರ ವ್ಯವಹಾರಗಳನ್ನು ಬಲಪಡಿಸುವ ಸಲುವಾಗಿ ಹೆಚ್ಚು ಶ್ರಮ ಹಾಕಲಿದ್ದೀರಿ. ನಿಮಗೆ ಯಶಸ್ಸು ದೊರೆಯುವ ಸಾಧ್ಯತೆ ಹೆಚ್ಚು ಇದೆ.

ಶುಭದಿನ 7. ಚಾಮುಂಡಿ ಸ್ತುತಿ ವನದುರ್ಗಾ ಆರಾಧನೆ ಮಾಡಿರಿ.




ನಿಮ್ಮ ಮಗನೋ ಅಥವಾ ಮಗಳ ಪ್ರಗತಿ. ಆದಾಯ ಮೂಲಗಳು ಹೆಚ್ಚಿಸಿಕೊಳ್ಳುವ ಸಾಧ್ಯತೆ ಇದೆ. ಪ್ರೀತಿ ಪ್ರೇಮ ಸಂಬಂಧದಲ್ಲಿ ತೊಡಗಿರುವವರು ಸುಮಧುರ ಅನುಭವವನ್ನು ಪಡೆಯಲಿದ್ದೀರಿ.

ಶುಭದಿನ 9. ಹನುಮಾನ್ ಚಾಲಿಸ್ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ.

ಶುಭದಿನ 11. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ನಿಮ್ಮ ಸೋದರ ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ.

ಶುಭದಿನ 8. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಇದೇ ವೇಳೆ ಕುಟುಂಬದ ಸದಸ್ಯರಿಗೆ ಕೆಲವು ಕೆಲಸಗಳನ್ನು ವಹಿಸುತ್ತೀರಿ. ಅವುಗಳನ್ನು ತುಂಬ ಶ್ರದ್ಧೆಯಿಂದ ಅವರು ಮಾಡಿ ಮುಗಿಸುತ್ತಾರೆ.

ಶುಭದಿನ 9. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ವೈವಾಹಿಕ ಜೀವನವು ಸಂತಸದಾಯಕವಾಗಿರುತ್ತದೆ. ವ್ಯಾಪಾರ ವ್ಯವಹಾರಕ್ಕೆ ಸಂಬಂಧಿಸಿದ ಪ್ರಮುಖ ಕೆಲಸ ಪೂರ್ಣಗೊಳಿಸಲು ಸಾಧ್ಯವಾಗುತ್ತದೆ.

ಶುಭದಿನ 10. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸುವ ಸಾಧ್ಯತೆ ಇದೆ. ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಆಗುತ್ತದೆ. ಹಣ ಹೂಡಿಕೆ ಹಾಗೂ ವಿದೇಶ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಆರೋಗ್ಯದಲ್ಲಿ ಸುಧಾರಣೆ ಗೋಚರಿಸಲಿದೆ.

ಶುಭದಿನ 12. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ.

ಶುಭದಿನ 11. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ದೊರೆಯಲಿವೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ.

ಶುಭದಿನ 6. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.




ಈ ಹಿಂದೆ ಪೂರ್ಣಗೊಳಿಸಲು ಸಾಧ್ಯವಾಗದಂಥ ಹಲವು ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಆಗುತ್ತದೆ. ವಾರದ ಮೊದಲ ಭಾಗವು ಆರೋಗ್ಯದ ಮೇಲೆ ಅಡ್ಡ ಪರಿಣಾಮ ಬೀರುತ್ತದೆ. ನಿಮಗೆ ಹೆಚ್ಚು ಸಮಯವನ್ನು ಮೀಸಲಿಡುತ್ತೀರಿ.

ಶುಭದಿನ 10. ಕಾರ್ತಿಕೇಯ ಸ್ತೋತ್ರ ಪಠಣ ಮಾಡಿರಿ.

DHEEPAM
LAMP OIL
BLEND OF 5 OILS
ದೀಪದ ಬೆಳಕಲ್ಲಿ
ಒಂದು ದೈವೀಕ
ಅನುಭವ
ಸುಗಂಧ ಸುವಾಸನೆ
ಹರಡುವ ಪಂಚ ದೀಪ ಎಣ್ಣೆ
